## ಸುದ್ದಿ ಕಾರ್ನರ್

### ಸಫಾಯಿ ಕರ್ಮಚಾರಿಗಳ ಸ್ಥಿತಿಗತಿಗಳ ಕುರಿತು ಕಾರ್ಯಾಗಾರ ನಾಳೆ

**ಮೈಸೂರು:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಡಾ. ಬಾಬು ಜಗಜೀವನ ರಾಮ್ ಅಧ್ಯಯನ, ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರ ವತಿಯಿಂದ ?ಸಫಾಯಿ ಕರ್ಮಚಾರಿಗಳ ಸ್ಥಿತಿಗತಿಗಳ ಕುರಿತು ಒಂದು ದಿನದ ಕಾರ್ಯಾಗಾರ ನ.19 ರಂದು ಬೆಳಗ್ಗೆ 10.30 ಗಂಟೆಗೆ ಕಾವೇರಿ ಸಭಾಂಗಣ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಇಲ್ಲಿ ಆಯೋಜಿಸಲಾಗಿದೆ.

ಮೈಸೂರು ಮಹಾನಗರ ಪಾಲಿಕೆ ಆಯುಕ್ತರಾದ ಶೇಖ್ ತನ್ವೀರ್ ಆಸಿಫ್ ಅವರು ಕಾರ್ಯಕ್ರಮದ ಉದ್ಘಾಟನೆ ಮಾಡಲಿದ್ದಾರೆ. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ಶರಣಪ್ಪ ವಿ.ಹಲಸೆ ಅಧ್ಯಕ್ಷತೆ ವಹಿಸುವರು.

ಡಾ. ಬಾಬು ಜಗಜೀವನ ರಾಮ್ ಸಂಶೋಧನಾ ಸಂಸ್ಥೆಯ ನಿರ್ದೇಶಕರಾದ ರಾಜೇಶ್ ಜಿ ಗೌಡ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಬೆಂಗಳೂರು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಸಫಾಯಿ ಕರ್ಮಚಾರಿಗಳ ರಾಜ್ಯ ಮೇಲ್ವಿಚಾರಣ ಸಮಿತಿಯ, ಸದಸ್ಯರಾದ ಡಾ.ಕೆ.ಬಿ. ಓಬಳೇಶ್ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸುವರು.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಡೀನ್ (ಶೈಕ್ಷಣಿಕ) ಪ್ರೊ.ಎಂ. ರಾಮನಾಥಂ ನಾಯ್ಡು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಸಚಿವರಾದ (ಪರೀಕ್ಷಾಂಗ) ಪ್ರೊ.ಸಿ.ಎಸ್ ಆನಂದ ಕುಮಾರ್, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿಗಳು ಮತ್ತು ನಿರ್ದೇಶಕರು- ಅಖಕಿಂ ಪ್ರೊ.ನಿರಂಜನ್ ರಾಜ್ ಎಸ್, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಡೀನ್ (ಅಧ್ಯಯನ ಕೇಂದ್ರ) ಡಾ.ಎನ್.ಆರ್. ಚಂದ್ರೇಗೌಡ ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.

### ಮಹಿಳಾ ಸರ್ಕಾರಿ ಕಾಲೇಜಗೆ 'ಕುಸ್ತಿ ಚಾಂಪಿಯನ್' ಪಟ್ಟ

**ಮಂಡ್ಯ:** ಮಂಡ್ಯ ವಿಶ್ವವಿದ್ಯಾನಿಲಯದ 2025-26 ನೇ ಸಾಲಿನ ಅಂತರ ಕಾಲೇಜುಗಳ ಮಹಿಳಾ ಕುಸ್ತಿ ಪಂದ್ಯಾವಳಿಯಲ್ಲಿ ಮಂಡ್ಯದ ಮಹಿಳಾ ಸರ್ಕಾರಿ ಕಾಲೇಜಿನ ತಂಡವು ಈ ಬಾರಿಯ 'ಚಾಂಪಿಯನ್ ಶಿಪ್' ತಂಡವಾಗಿ ಹೊರಹೊಮ್ಮಿದೆ.

ಅಕ್ಟೊಬರ್ 18 ರಂದು ಮಂಡ್ಯ ವಿಶ್ವವಿದ್ಯಾನಿಲಯದ ನಾಲ್ವಡಿ ಕೃಷ್ಣರಾಜ ಒಡೆಯರ್ ಹಾಲ್‌ನಲ್ಲಿ ನಡೆದ ಅಂತರ ಕಾಲೇಜುಗಳ ಮಹಿಳಾ ಕುಸ್ತಿ ಪಂದ್ಯಾವಳಿಯಲ್ಲಿ 4 ಪ್ರಥಮ ಸ್ಥಾನ, 1 ದ್ವಿತೀಯ ಸ್ಥಾನ ಹಾಗೂ 6 ತೃತೀಯ ಸ್ಥಾನ ಗಳಿಸಿ, ಒಟ್ಟು 11 ಪದಕಗಳನ್ನು ಮಹಿಳಾ ಸರ್ಕಾರಿ ಕಾಲೇಜಿನ ತಂಡವು ಪಡೆದಿದ್ದು, ಇದರೊಂದಿಗೆ ಒಟ್ಟು 29 ಅಂಕಗಳನ್ನ ಗಳಿಸುವ ಮೂಲಕ ಈ ಬಾರಿಯ ಮಂಡ್ಯ ವಿಶ್ವವಿದ್ಯಾನಿಲಯದ ಮಹಿಳಾ ವಿಭಾಗದ "ಕುಸ್ತಿ ಚಾಂಪಿಯನ್ಸ್ " ತಂಡವಾಗಿ ಹೊರಹೊಮ್ಮಿದೆ.

ಪದಕ ವಿಜೇತರಿಗೆ ಹಾಗೂ ಚಾಂಪಿಯನ್ ಶಿಪ್‌ಗೆ ಕಾರಣರಾದ ತಂಡದ ಎಲ್ಲಾ ಮಹಿಳಾ ಕುಸ್ತಿಪಟುಗಳಿಗೆ, ತರಬೇತುದಾರರಾದ ದೈಹಿಕ ಶಿಕ್ಷಣ ನಿರ್ದೇಶಕ ಕೆ.ಆರ್ ಲೋಕೇಶ್ ಅವರಿಗೆ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಗುರುರಾಜ್ ಪ್ರಭು.ಕೆ, ಗೆಜೆಟೆಡ್ ಮ್ಯಾನೇಜರ್ ಆದ ರವಿಕಿರಣ್ ಕೆ.ಪಿ, ಕ್ರೀಡಾ ಸಮಿತಿಯ ಸದಸ್ಯರುಗಳು ಹಾಗೂ ಕಾಲೇಜಿನ ಎಲ್ಲಾ ಬೋಧಕ ಬೋಧಕೇತರ ವೃಂದದವರು ಅಭಿನಂದಿಸಿದ್ದಾರೆ.

### ವಿವಿಧ ಯೋಜನೆಗಳ ಸೌಲಭ್ಯಕ್ಕೆ ಅರ್ಜಿ

**ಮಂಡ್ಯ:** 2025-26ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಯೋಜನೆಗಳಾದ ಧನಶ್ರೀ ಯೋಜನೆ, (ಹೆಚ್.ಐ.ವಿ ಸೋಂಕಿತ ಮಹಿಳೆಯರಿಗೆ) ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ, (ಟ್ರ್ಯಾನ್ಸ್ ಜೆಂಡರ್ಸ್‌ಗಳಿಗೆ) ಚೇತನಯೋಜನೆ (ದಮನಿತ ಮಹಿಳೆಯರಿಗೆ) ಹಾಗೂ ಉದ್ಯೋಗಿನಿ ಯೋಜನೆಗಳ ಸೌಲಭ್ಯ ಪಡೆಯಲು ಸೇವಾ ಸಿಂಧು ಪೋರ್ಟಲ್ ನಲ್ಲಿ ಆನ್ಲೈನ್ ಹಾಗೂ ಆಫ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿದಾರರು ಬಾಪೂಜಿ ಸೇವಾ ಕೇಂದ್ರ, ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಕೇಂದ್ರಗಳಲ್ಲಿ https://sevasindhu.karnataka.gov.in ವೆಬ್‌ಸೈಟ್ ಮೂಲಕ ಡಿಸೆಂಬರ್ 15.12.2025 ರ ಸಂಜೆ 5:30 ರವರಗೆ ಅರ್ಜಿ ಸಲ್ಲಿಸಬಹುದಾಗಿದೆ. ಈ ಹಿಂದೆ ಅರ್ಜಿ ಸಲ್ಲಿಸಿದವರಿಗೆ ಮತ್ತೊಮ್ಮೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು, ಜಿಲ್ಲೆ ಹಾಗೂ ಜಿಲ್ಲಾ ಅಭಿವೃದ್ಧಿ ನಿರೀಕ್ಷಕರು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಕಛೇರಿ ಅಥವಾ ದೂ. ಸಂ: 08232-221315 ಅನ್ನು ಸಂಪರ್ಕಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನೇರಸಂದರ್ಶನ

**ಮಂಡ್ಯ:** ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಮತ್ತು ಮೈಸೂರಿನ ಜೆಕೆ ಟೈರ್ & ಇಂಡಸ್ಟ್ರೀಸ್ ಲಿಮಿಟೆಡ್, ಸಂಸ್ಥೆಯ ಸಹಭಾಗಿತ್ವದಲ್ಲಿ ನ.21 ರಂದು ಬೆಳಿಗ್ಗೆ 10 ಗಂಟೆಗೆ ಮೈಸೂರು ರಿಂಗ್ ರಸ್ತೆಯ ಪಕ್ಕದಲ್ಲಿರುವ ಜೆಕೆ ಟೈರ್ & ಇಂಡಸ್ಟ್ರೀಸ್ ಲಿಮಿಟೆಡ್ ಸಂಸ್ಥೆಯಲ್ಲಿ ನೇರ ಸಂದರ್ಶನ ನಡೆಯಲಿದ್ದು ಡಿಪ್ಲೊಮಾ (ಮೆಕ್ಯಾನಿಕಲ್, ಆಟೋಮೊಬೈಲ್, ಮೆಕಟ್ರಾನಿಕ್ಸ್, ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್) ಉತ್ತೀರ್ಣರಾದ ಪುರುಷ, ಮಹಿಳಾ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.08232-295124, 9739636864, 9945067012, 9900527996 ಅನ್ನು ಸಂಪರ್ಕಿಶಲು ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಾರ್ಡ್ ಸಭೆ ನ.20ಕ್ಕೆ

**ಮಂಡ್ಯ:** ಕಸಬಾ ಹೋಬಳಿಯ ಗೋಪಾಲಪುರ ಗ್ರಾಮ ಪಂಚಾಯಿತಿ ಕಾರ್ಯಾಲಯದ 2025-26 ನೇ ಸಾಲಿನ ವಾರ್ಡ್ ಮತ್ತು ಗ್ರಾಮ ಸಭೆಯನ್ನು ಆಯೋಜಿಸಲಾಗಿದ್ದು, ನವೆಂಬರ್ 20 ರಂದು ಗೋಪಾಲಪುರ 1ನೇ ವಾರ್ಡ್ ಸಭೆಯನ್ನು ಬೆಳ್ಳಿಗೆ 11 ಗಂಟೆಗೆ ಮಾರಮ್ಮ ದೇವಸ್ಥಾನ ಆವರಣದಲ್ಲಿ, ಗೋಪಾಲಪುರ 2ನೇ ವಾರ್ಡ್ ಸಭೆಯನ್ನು ಬೆಳ್ಳಿಗೆ 12 ಗಂಟೆಗೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಮತ್ತು ಹೆಚ್. ಕೋಡಿಹಳ್ಳಿ ಸಭೆಯನ್ನು ಮಧ್ಯಾಹ್ನ 2 ಗಂಟೆಗೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಆಯೋಜಿಸಲಾಗಿದೆ.

## ಗೃಹ ಸಚಿವರಿಗೆ ಮನವಿ ಸಲ್ಲಿಸಿದ ಕೆಯುಡಬ್ಲ್ಯೂಜೆ ಜಿಲ್ಲಾಧ್ಯಕ್ಷ ಎಲ್.ಯೋಗೇಶ್

# ಗ್ರಾಮೀಣ ಪತ್ರಕರ್ತರಿಗೆ 'ಸ್ಪಂದನೆಯ' ಭರವಸೆ



**ತುಮಕೂರು:** ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಎಲ್.ಯೋಗೇಶ್ ನೇತೃತ್ವದಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರನ್ನು ಭೇಟಿ ಮಾಡಿ ಸಂಘದ ಮುಂದಿನ ಚಟುವಟಿಕೆಗಳಿಗೆ ಸಹಕಾರ ನೀಡುವಂತೆ ಮನವಿ ಮಾಡಲಾಯಿತು.

ನ.17 ಸೋಮವಾರದಂದು ಸಿದ್ಧಾರ್ಥ ಮೆಡಿಕಲ್ ಕಾಲೇಜಿನಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರೊಂದಿಗೆ ಮಾತನಾಡಿ, ಗ್ರಾಮೀಣ ಪತ್ರಕರ್ತರಿಗೆ ಉಚಿತ ಪ್ರಯಾಣಕ್ಕೆ ಬಸ್‌ಪಾಸ್ ಸೌಲಭ್ಯಕ್ಕೆ ಸರ್ಕಾರ ಬಜೆಟ್‌ನಲ್ಲಿ ಘೋಷಿಸಲಾಗಿದ್ದು, ತಾಂತ್ರಿಕ ಅಡೆತಡೆ ನಿವಾರಿಸಿ, ನಿಯಮ ಸರಳೀಕರಣಗೊಳಿಸುವಂತೆ ಸಂಘದ ಪದಾಧಿಕಾರಿಗಳು ಮನವಿ ಮಾಡಿದರು.

ಮನವಿಯನ್ನು ಆಲಿಸಿದ ಸಚಿವರು ಸಂಬಂಧಪಟ್ಟ ಇಲಾಖೆಗೆ ಪತ್ರ ಬರೆಯುವುದಾಗಿ ತಿಳಿಸಿ, ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಅವರೊಂದಿಗೆ ಮಾತನಾಡುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷ ಪ್ರಸನ್ನ ದೊಡ್ಡಗುಣಿ, ಪ್ರಧಾನ ಕಾರ್ಯದರ್ಶಿ ಟಿ.ಇ.ರಘುರಾಮ್, ಖಜಾಂಜಿ ಸತೀಶ್ ಹಾರೋಗೆರೆ, ಜಗನ್ನಾಥ್ ಕಾಳೇನಹಳ್ಳಿ, ಮಾರುತಿ ಗಂಗಹನುಮಯ್ಯ, ಬೆವರಹನಿ ಪತ್ರಿಕೆ ಸಂಪಾದಕ ಕುಚ್ಚಂಗಿ ಪ್ರಸನ್ನ, ಎಸ್.ಸುರೇಶ್‌ವತ್ಸ, ಯಶಸ್ ಕೆ.ಪದ್ಮನಾಭ್, ಮಧು ಇಂಗಳದಾಳ್, ಕೊರಟಗೆರೆ ಪುರುಷೋತ್ತಮ, ವಿಜಯ್, ಹೇಮಂತ್ ಇತರರು ಇದ್ದರು.

### ಡಿಸೆಂಬರ್ 14ಕ್ಕೆ ಪ್ರತಿಭಾ ಪುರಸ್ಕಾರ

ನೂತನ ಪದಾಧಿಕಾರಿಗಳನ್ನು ಅಭಿನಂದಿಸಿ, ಬರುವ ತಿಂಗಳಲ್ಲಿ ಪದಗ್ರಹಣ ಸಮಾರಂಭ ದಲ್ಲೇ ಪ್ರತಿಭಾ ಪುರಸ್ಕಾರ ನೆರವೇರಿಸುವಂತೆ, ಕಾರ್ಯಕ್ರಮಕ್ಕೆ ಖುದ್ದು ಹಾಜರಾಗುವುದಾಗಿ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದರು. ಈ ಹಿಂದಿನಂತೆ ನನ್ನ ಸಹಕಾರ ಇರಲಿದೆ, ಆರ್ಥಿಕವಾಗಿ ಹಿಂದುಳಿದ ಪತ್ರಕರ್ತರ ಪ್ರತಿಭಾನ್ವಿತ ಮಕ್ಕಳಿಗೆ ಪುರಸ್ಕಾರ ದೊರೆಯಲಿ, ಪ್ರತಿ ವರ್ಷ 25 ಲಕ್ಷ ಹಣ ನೀಡುವುದಾಗಿ ತಿಳಿಸಿದರು.

### ಪ್ರಣಾಳಿಕೆಯ ಭರವಸೆ ಈಡೇರಿಸುತ್ತೇವೆ

"ಚುನಾವಣೆಗೂ ಮುನ್ನ ನೀಡಿದ್ದ ಪ್ರಣಾಳಿಕೆಯ ಎಲ್ಲಾ ಭರವಸೆಗಳನ್ನು ಈಡೇರಿಸುವ ನಿಟ್ಟಿನಲ್ಲಿ ಕಾರ್ಯೋನ್ಮುಖರಾಗಿ ಕೆಲಸ ಮಾಡುತ್ತೇವೆ. ಎಲ್ಲಾ ಜನಪ್ರತಿನಿಧಿಗಳಿಂದಲೂ ಸಹಕಾರ-ಬೆಂಬಲ ವ್ಯಕ್ತವಾಗುತ್ತಿದೆ, ಹೊಸ ವರ್ಷದ ಆರಂಭಕ್ಕೆ ಕ್ಯಾಲೆಂಡರ್ ರೂಪಿಸುವ ಯೋಜನೆ ಇದೆ ಜೊತೆಗೆ 'ಜರ್ನಲಿಸ್ಟ್ ಡೈರೆಕ್ಟರಿ' ತರಲು ಸಿದ್ಧತೆ ಕೈಗೊಂಡಿದ್ದೇವೆ, ಉಚಿತ ಬಸ್‌ಪಾಸ್, ಆರೋಗ್ಯ ವಿಮೆಗೆ ಮೊದಲ ಆದ್ಯತೆ ನೀಡಲಾಗಿದೆ.

| ಎಲ್.ಯೋಗೇಶ್, ಅಧ್ಯಕ್ಷರು, ಕಾರ್ಯನಿರತ ಪತ್ರಕರ್ತರ ಸಂಘ, ತುಮಕೂರು.

## ಡೀಸಿ ಡಾ.ಕುಮಾರ ಅಧಿಕಾರಿಗಳಿಗೆ ಸೂಚನೆ

# ದಢಾರ ರುಬೆಲ್ಲಾ ನಿರ್ಮೂಲನೆಗೆ ಅಗತ್ಯ ಕ್ರಮವಹಿಸಿ



**ಮಂಡ್ಯ:** ಮಂಡ್ಯ ಜಿಲ್ಲೆಯಲ್ಲಿ ದಢಾರ, ರುಬೆಲ್ಲಾ ನಿರ್ಮೂಲನೆಗೆ ಅಧಿಕಾರಿಗಳು ಸೂಕ್ತ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ಹೇಳಿದರು.


ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದ ಪ್ರಗತಿ ಮತ್ತು ದಢಾರ ರುಬೆಲ್ಲಾ ನಿರ್ಮೂಲನೆಯ ಜಿಲ್ಲಾ ಮಟ್ಟದ ಚಾಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಮಕ್ಕಳನ್ನು ದಢಾರ ರುಬೆಲ್ಲಾ ಖಾಯಿಲೆಯಿಂದ ರಕ್ಷಿಸಲು ಸದರಿ ವರ್ಷದ ಏಪ್ರಿಲ್ ಮಾಯೆಯಿಂದ ಅಕ್ಟೋಬರ್ ಮಾಹೆಯವರೆಗೂ 11520 ಮಕ್ಕಳಿಗೆ ಸಂಪೂರ್ಣ ಲಸಿಕೆ ನೀಡುವ ಮೂಲಕ ಶೇ 111.2 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ತಿಳಿಸಿದರು.

ದಢಾರ ರುಬೆಲ್ಲಾ 1 ನೇ ಡೋಸ್ ಲಸಿಕೆಯನ್ನು 11580 ಮಕ್ಕಳಿಗೆ ನೀಡಲಾಗಿದೆ ಹಾಗೂ ಎರಡನೇ ಡೋಸ್ ಲಸಿಕೆಯನ್ನು 11520 ಮಕ್ಕಳಿಗೆ ನೀಡಲಾಗಿದೆ. ಮಂಡ್ಯ ಹಾಗೂ ನಾಗಮಂಗಲದಲ್ಲಿ ಎರಡನೇ ಡೋಸ್ ನಿಂದ ಹೆಚ್ಚು ಮಕ್ಕಳು ಹೊರಗುಳಿದಿದ್ದಾರೆ ಅವರಿಗೆ ದಢಾರ ರುಬೆಲ್ಲಾ ಎರಡನೇ ಡೋಸ್ ಲಸಿಕೆ ನೀಡಿಸಿ ಎಂದು ಹೇಳಿದರು. ಜಿಲ್ಲೆಯಲ್ಲಿ ಸದರಿ ವರ್ಷ 174 ಮಕ್ಕಳಲ್ಲಿ ದದ್ದು ಜ್ವರ ಕಾಣಿಸಿಕೊಂಡಿದ್ದು ಪರಿಶೀಲನೆ ನಡೆಸಿದಾಗ 7 ದಢಾರ ಹಾಗೂ 2 ರುಬೆಲ್ಲಾ ಪ್ರಕರಣಗಳು ದೃಢಪಟ್ಟಿದೆ. ಸದರಿ ವರ್ಷ ತೀವ್ರವಾದ ಫ್ಲಾಸಿಡ್ ಪಾರ್ಶ್ವವಾಯು 12 ಪ್ರಕರಣಗಳು ದಾಖಲಾಗಿವೆ ಎಂದು ಹೇಳಿದರು.

ಅಧಿಕಾರಿಗಳು ಸಾರ್ವಜನಿಕರಿಗೆ ದಢಾರ ರುಬೆಲ್ಲಾ ಕುರಿತಾಗಿ ಅರಿವು ಮೂಡಿಸಬೇಕು. ಸಂಬಂಧಪಟ್ಟ ಇಲಾಖೆಯ ಜೊತೆಗೂಡಿ ದಢಾರ ರುಬೆಲ್ಲಾ ನಿಯಂತ್ರಣಕ್ಕೆ ಸೂಕ್ತ ಕ್ರಮ ಕೈಗೊಳ್ಳಬೇಕು. ಡಿಸೆಂಬರ್ 21 ರಂದು ಪಲ್ಸ್ ಪೋಲಿಯೋ ಕಾರ್ಯಕ್ರಮವನ್ನು ರೂಪಿಸಲಾಗುವುದು ಎಂದು ಮಾಹಿತಿ ನೀಡಿದರು. ಸಭೆಯಲ್ಲಿ ಆರ್.ಸಿ ಎಚ್ ಅಧಿಕಾರಿ ಡಾ. ಕೆ.ಪಿ ಅಶ್ವಥ್, ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ಸೋಮಶೇಖರ್, ಕ್ಷಯ ರೋಗ ನಿರ್ಮೂಲನಾಧಿಕಾರಿ ಡಾ.ಎಂ.ಎನ್. ಆಶಾಲತಾ, ಕುಟುಂಬ ಕಲ್ಯಾಣಾಧಿಕಾರಿ ಡಾ.ಬೆಟ್ಟಸ್ವಾಮಿ, ನಿವೃತ್ತ ಡಿ.ಹೆಚ್.ಓ ಡಾ.ಟಿ.ಎನ್. ಮರೀಗೌಡ ಇತರರು ಇದ್ದರು.

## ಶುಚಿ-ರುಚಿಗೆ ಮೊದಲ ಆದ್ಯತೆ: ಶ್ರೀರಾಮಪ್ಪ

### ಹೋಟೆಲ್ 'ರಾಯನ್ ರಾಮ್ ಭವನ್' ಶುಭಾರಂಭ



**ಕೋಲಾರ:** ತಾಲ್ಲೂಕಿನ ಬೆತ್ತನಿ ಗ್ರಾಮದ ಬಳಿಯ ಕೋಲಾರ-ಬೆಂಗಳೂರು ರಾಷ್ಟ್ರೀಯ ಹೆದ್ದಾರಿ 75 ರಲ್ಲಿ ನೂತನವಾಗಿ ಹೋಟೆಲ್ ರಾಯನ್ ರಾಮ್ ಭವನ್ ಶುಭ ಆರಂಭವಾಗಿದ್ದು, ಅತ್ಯುತ್ತಮ ತಿಂಡಿ ತಿನಿಸುಗಳು, ಕಾಫೀ, ಟೀ, ಜ್ಯೂಸ್, ನಾರ್ತ್ ಇಂಡಿಯನ್, ಸೌತ್ ಇಂಡಿಯನ್ ಊಟಕ್ಕೆ ಮತ್ತು ಚಾಟ್ಸ್‌ಗಳಿಗಾಗಿ ಒಮ್ಮೆ ಭೇಟಿ ನೀಡಿ ಎಂದು ಹೋಟೆಲ್ ಮಾಲೀಕರು ಮನವಿ ಮಾಡಿದರು.

ಆಹಾರ ಸಚಿವ ಕೆ.ಹೆಚ್. ಮುನಿಯಪ್ಪ ಅವರು ನೂತನ ಹೋಟೆಲ್ ಉದ್ಘಾಟನೆ ನೆರವೇರಿಸಿ ಶುಭಕೋರಿದರು. ಗ್ರಾಹಕರಿಗೆ ಉತ್ತಮ ಗುಣಮಟ್ಟದ ಆಹಾರವನ್ನು ಕಡಿಮೆ ಬೆಲೆಯಲ್ಲಿ ನೀಡುವ ಮೂಲಕ ಜನಮನ್ನಣೆಗೊಳ್ಳಲಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಇಂಚರ ಗೋವಿಂದರಾಜು, ಡಿಸಿಪಿ ದೇವರಾಜು, ಜಿಲ್ಲಾ ಕಾಂಗ್ರೆಸ್ ಮಾಜಿ ಅಧ್ಯಕ್ಷ ಚಂದ್ರಾರೆಡ್ಡಿ, ಬ್ಲಾಕ್ ಕಾಂಗ್ರೆಸ್ ಮಾಜಿ ಅಧ್ಯಕ್ಷ ಪ್ರಸಾದ್ ಬಾಬು, ನಂದಿನಿ ಪ್ರವೀಣ್ ಮತ್ತು ಹಿತೈಷಿಗಳು ಹಾಗೂ ಕುಟುಂಬಸ್ಥರು ಹಾಜರಿದ್ದು ಶುಭಾಶಯ ಕೋರಿದರು. ಹೋಟೇಲ್ ಮಾಲೀಕರಾದ ಶ್ರೀರಾಮಪ್ಪ, ತಿಮ್ಮಕ್ಕ, ಲೋಕೇಶ್, ಭರತ್, ರಘುಪತಿ ಹಾಜರಿದ್ದು, ಹೋಟೆಲ್ ವಿಶೇಷತೆ ಬಗ್ಗೆ ಮಾಹಿತಿ ನೀಡಿದರು.

## 6 ವರ್ಷದೊಳಗಿನ ಮಕ್ಕಳಿಗೆ ಆಧಾರ್ ನೋಂದಣಿ ಮಾಡಿಸಿ: ಡಾ.ಕುಮಾರ



**ಮಂಡ್ಯ:** ಜಿಲ್ಲೆಯಲ್ಲಿ 4 ಸಾವಿರಕ್ಕೂ ಅಧಿಕ 6 ವರ್ಷದೊಳಗಿನ ಮಕ್ಕಳು ಆಧಾರ್‌ನಲ್ಲಿ ನೋಂದಣಿ ಮಾಡಿಸಿಕೊಂಡಿಲ್ಲ ಸದರಿ ಮಕ್ಕಳಿಗೆ ಆಧಾರ್ ನೋಂದಣಿ ಮಾಡಿಸಿ ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ಹೇಳಿದರು.

ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಆಯೋಜಿಸಲಾಗಿದ್ದ ಪೋಷಣ್ ಅಭಿಯಾನ ಯೋಜನೆಯಡಿ ಒಗ್ಗೂಡಿಸುವಿಕೆ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು 3-6 ವರ್ಷದೊಳಗಿನ 4 ಸಾವಿರಕ್ಕೂ ಹೆಚ್ಚಿನ ಮಕ್ಕಳು ಆಧಾರ್ ನಲ್ಲಿ ನೋಂದಣಿ ಮಾಡಿಸಿಕೊಂಡಿಲ್ಲ ಅವರೆಲ್ಲರಿಗೂ ಒಂದು ತಿಂಗಳೊಳಗಾಗಿ ಆಧಾರ್ ಮಾಡಿಸಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳು ಇರುವ ಅಂಗನವಾಡಿಗಳಿಗೆ ಆಧಾರ್ ಸೇವಕರನ್ನು ಕರೆಸಿ ಅಲ್ಲಿಯೇ ಮಕ್ಕಳಿಗೆ ಆಧಾರ್ ಕಾರ್ಡ್ ಮಾಡಿಸಿ. ಮಕ್ಕಳು ಶಾಲೆಗೆ ಸೇರಿಸಲು ಆಧಾರ್ ಕಾರ್ಡ್ ಕಡ್ಡಾಯ ಹೀಗಾಗಿ ಅಧಿಕಾರಿಗಳು ವಿಶೇಷ ಆಸಕ್ತಿ ವಹಿಸಿ ಆಧಾರ್ ಕಾರ್ಡ್ ಮಾಡಿಸಿ ಎಂದು ಹೇಳಿದರು.

ಎಲ್ಲಾ ಅಂಗನವಾಡಿಗಳಿಗೆ ಪೌಷ್ಟಿಕ ಆಹಾರಗಳು ಸರಿಯಾಗಿ ಪೂರೈಕೆ ಮಾಡಲಾಗುತ್ತಿದೆಯೇ ಪರಿಶೀಲಿಸಿ. ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರಿಗೆ ಹೊಸ ಮೊಬೈಲ್ ಆಪ್ ಸಿದ್ಧಪಡಿಸಲಾಗಿದೆ. ಅದರಲ್ಲಿ ಮಕ್ಕಳ ಹಾಜರಾತಿ ಹಾಗೂ ಮಕ್ಕಳಿಗೆ ನೀಡಿರುವ ಪೌಷ್ಟಿಕ ಆಹಾರ ಪದಾರ್ಥಗಳನ್ನು ಫೋಟೋ ಮೂಲಕ ಅಪ್ಲೋಡ್ ಮಾಡಬೇಕು ಎಂದು ಹೇಳಿದರು.

ಜಿಲ್ಲೆಯ ಅಂಗನವಾಡಿ ಕಾರ್ಯಕರ್ತೆಯರ ಹುದ್ದೆ ಹಾಗೂ ಅಂಗನವಾಡಿ ಸಹಾಯಕಿಯರ ಹುದ್ದೆಗೆ ಖಾಲಿ ಇದೆ. ಶೀಘ್ರವಾಗಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಬೇಕು. ಮಕ್ಕಳಿಗೆ ನೀಡಲಾಗುವ ಪೌಷ್ಟಿಕ ಆಹಾರಗಳನ್ನು ಸರಿಯಾಗಿ ಪೂರೈಕೆ ಮಾಡಿ ಅವಧಿ ಮುಗಿದ ಪದಾರ್ಥಗಳನ್ನು ನೀಡಬೇಡಿ ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಯೋಜನಾಧಿಕಾರಿ ಧನುಷ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಆಶಾ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಲೋಕೇಶ್, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಶ್ರೀನಿವಾಸ್ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಲಿಂಗಾನುಪಾತ ಸರಿದೂಗಿಸಲು ಸೂಕ್ತ ಕ್ರಮವಹಿಸಿ



**ಮಂಡ್ಯ:** ಜಿಲ್ಲೆಯಲ್ಲಿ ಪ್ರತಿ 1000 ಪುರುಷರಿಗೆ ಕೇವಲ 935 ಹೆಣ್ಣು ಮಕ್ಕಳ ಲಿಂಗಾನುಪಾತ ಇದೆ. ಅಧಿಕಾರಿಗಳು ಲಿಂಗಾನುಪಾತವನ್ನು ಸರಿದೂಗಿಸಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ಹೇಳಿದರು.

ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ತಾಯಿ ಕಾರ್ಡ್ ಇದ್ದವರಿಗೆ ಮಾತ್ರ ಸ್ಕ್ಯಾನಿಂಗ್ ಮಾಡಿ ಕಾನೂನು ಬಾಹಿರವಾಗಿ ಸ್ಕ್ಯಾನಿಂಗ್ ಮಾಡಬಾರದು ಇದರಿಂದ ಹೆಣ್ಣು ಭ್ರೂಣ ಹತ್ಯೆಗಳು ಹೆಚ್ಚಾಗುತ್ತವೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಕಾನೂನು ಬಾಹಿರವಾಗಿ ಸ್ಕ್ಯಾನಿಂಗ್ ಮಾಡುತ್ತಿರುವವರನ್ನು ಪತ್ತೆಹಚ್ಚಿ ಸೂಕ್ತ ಕಾನೂನು ಕ್ರಮವನ್ನು ಅವರ ಮೇಲೆ ಕೈಗೊಳ್ಳಿ ಎಂದರು.

ಅಧಿಕಾರಿಗಳು ಜಿಲ್ಲೆಯಲ್ಲಿ ಇರುವ ಸ್ಕ್ಯಾನಿಂಗ್ ಸೆಂಟರ್ ಗಳಿಗೆ ನಿರ್ದಿಷ್ಟ ಅವಧಿಯಲ್ಲಿ ಭೇಟಿ ನೀಡಿ ಪರಿಶೀಲನೆ ನಡೆಸಿ, ಜನರಿಗೆ ಹೆಣ್ಣು ಭ್ರೂಣ ಹತ್ಯೆ ತಡೆಯಲು ಕುರಿತಾಗಿ ಜಾಗೃತಿ ಮೂಡಿಸುವ ಕಾರ್ಯಕ್ರಮ ಗಳನ್ನು ಮಾಡಿ ಆರೋಗ್ಯ ಇಲಾಖೆ ಲಿಂಗಾನುಪಾತ ಸರಿದೂಗಿಸುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸಿ ಎಂದು ತಿಳಿಸಿದರು.

### ಪ್ರಗತಿ ಪರಿಶೀಲನಾ ಸಭೆ ಡೀಸಿ ಸೂಚನೆ

ಜಿಲ್ಲೆಯ 10 ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಡೆಲಿವರಿ ಪ್ರಮಾಣ ಕಡಿಮೆ ಇದೆ. ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಡೆಲಿವರಿ ಪ್ರಮಾಣ ಕಡಿಮೆಯಾಗಲೂ ಕಾರಣವೇನು ಎಂದು ಪರಿಶೀಲನೆ ನಡೆಸಿ. ಜಿಲ್ಲೆಯಲ್ಲಿ ಶೇ 69 ರಷ್ಟು ಡೆಲಿವರಿ ಸರ್ಕಾರಿ ಆಸ್ಪತ್ರೆಗಳಲ್ಲಿ ನಡೆಯುತ್ತಿವೆ ಎಂದರು. ಹೈ ರಿಸ್ಕ್ ಡೆಲಿವರಿ ಇರುವವರಿಗೆ ಪೌಷ್ಟಿಕ ಆಹಾರ ಸರಿಯಾಗಿ ನೀಡಿ ಪೋಷಣೆ ಮಾಡಲಾಗುತ್ತಿದೆಯೇ ಎಂದು ಪರಿಶೀಲಿಸಿ ಎಂದು ತಿಳಿಸಿದರು.

ನಿಮೋನಿಯವನ್ನು ನಿರ್ಮೂಲನೆ ಮತ್ತು ಅದರ ಕುರಿತು ಅರಿವು ಮೂಡಿಸಲು ನವೆಂಬರ್ 12 ರಿಂದ 28 ಫೆಬ್ರವರಿ 2026 ರ ವರೆಗೆ Social Awareness And Actions To Neutralize Pneumonia Successfully (SAANS) ಅಭಿಯಾನ ರೂಪಿಸಲಾಗಿದೆ. 0-5 ವರ್ಷದೊಳಗಿನ ಮಕ್ಕಳ ಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ನಿಮೋನಿಯ ನಿರ್ಮೂಲನಾ ಲಸಿಕೆ ನೀಡುವ ಅಭಿಯಾನ ಇದಾಗಿದ್ದು ಈ ಸಂಬಂಧ ಜಿಲ್ಲಾಧಿಕಾರಿ ಡಾ.ಕುಮಾರ ಅವರು ಅಭಿಯಾನದ ಪೋಸ್ಟರ್ ಅನ್ನು ಬಿಡುಗಡೆ ಮಾಡಿದರು. ಸಭೆಯಲ್ಲಿ ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ.ಕೆ.ಪಿ.ಅಶ್ವಥ್, ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ಸೋಮಶೇಖರ್, ಕ್ಷಯ ರೋಗ ನಿರ್ಮೂಲನಾಧಿಕಾರಿ ಡಾ.ಎಂ.ಎನ್. ಆಶಾಲತಾ, ಡಾ. ಬೆಟ್ಟಸ್ವಾಮಿ, ನಿವೃತ್ತ ಡಿ.ಹೆಚ್.ಓ ಡಾ.ಟಿ.ಎನ್. ಮರೀಗೌಡ ಸೇರಿದಂತೆ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಂಚಾರಿ ನಿಯಮ ಪಾಲಿಸಿ, ರಸ್ತೆ ಅವಘಡ ತಪ್ಪಿಸಿ: ನ್ಯಾ| ಸವಿತಾ ಪಿ.ಆರ್

**ರಾಮನಗರ:** ವಾಹನ ಸವಾರರು ರಸ್ತೆಗಿಳಿದ ಕೂಡಲೇ ಸಂಚಾರಿ ನಿಯಮಗಳು ಜಾರಿಗೊಳ್ಳುತ್ತದೆ. ನಮ್ಮ ರಕ್ಷಣೆ ಹಾಗೂ ರಸ್ತೆಯಲ್ಲಿ ಸಂಚರಿಸುವವರೆಲ್ಲರ ಸುರಕ್ಷತೆಯ ಹಿತದೃಷ್ಟಿಯಿಂದ ಸಂಚಾರಿ ನಿಯಮಗಳನ್ನು ರೂಪಿಸಲಾಗಿದ್ದು, ಸಂಚಾರಿ ನಿಯಮಗಳನ್ನು ಪ್ರತಿಯೊಬ್ಬರು ಕಟ್ಟುನಿಟ್ಟಾಗಿ ಪಾಲಿಸಬೇಕೆಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತಾ ಪಿ.ಆರ್ ಅವರು ಕರೆ ನೀಡಿದರು.

ಅವರು ನ.17 ರ ಸೋಮವಾರ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ರಾಮನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಭಾರತೀಯ ಯೂತ್ ರೆಡ್ ಕ್ರಾಸ್ ಘಟಕ ಹಾಗೂ ಚನ್ನಪಟ್ಟಣ ತಾಲೂಕು ಶಾಖೆಯ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸಹಯೋಗದಲ್ಲಿ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದ್ದ ರಸ್ತೆ ಅಪಘಾತದಲ್ಲಿ ಬಲಿಯಾದವರ ಸ್ಮರಣಾರ್ಥ ವಿಶ್ವ ದಿನಾಚರಣೆ ಸಮಾರಂಭ ಹಾಗೂ ರಸ್ತೆ ಸುರಕ್ಷತಾ ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸವಾರರು ರಸ್ತೆ ಸಂಚಾರಿ ನಿಯಮಗಳನ್ನು ತಿಳಿದಿರಬೇಕು ಹಾಗೂ ರಸ್ತೆಗಳಿದ ಸಂದರ್ಭದಲ್ಲಿ ಅವುಗಳನ್ನು ಚಾಚೂತಪ್ಪದೇ



ಪಾಲಿಸಬೇಕು, ಈ ನಿಯಮಗಳು ರಸ್ತೆಯಲ್ಲಿ ಸವಾರರಿಗೆ ಗೊಂದಲಗಳನ್ನು ನೀವಾರಿಸುತ್ತವೆ, ಸವಾರರು ಹಾಗೂ ಪ್ರಯಾಣಿಕರು ಕಡ್ಡಾಯವಾಗಿ ಸೀಟ್ ಬೆಲ್ಟ್ ಹಾಕಲೇಬೇಕು, ಹೆಲ್ಮೆಟ್ ಅನ್ನು ಧರಿಸಲೇಬೇಕು. ನಿಗದಿಪಡಿಸಿರುವ ಸ್ಪೀಡ್ ಲಿಮಿಟ್ ನಲ್ಲಿಯೇ ವಾಹನವನ್ನು ಓಡಿಸಬೇಕು, ಬೆಂಗಳೂರು ಮೈಸೂರು ಎಕ್ಸ್‌ಪ್ರೆಸ್ ಹೆದ್ದಾರಿಯಲ್ಲಿ 100 ಕಿ.ಮೀನ ವೇಗವನ್ನು ಮಾತ್ರ ನಿಗದಿಪಡಿಸಲಾಗಿದೆ, ಮಿತಿಗೊಳಿಸಿದ ಈ ವೇಗದಲ್ಲಿಯೇ ಸಂಚರಿಸಬೇಕು. ಒಂದು ವೇಳೆ ಸ್ಪೀಡ್ ಹೆಚ್ಚಾದರೆ ಎ.ಐ ಕ್ಯಾಮೆರಾ ಗಳಿಂದ ಸಂಚಾರಿ ನಿಯಮ ಉಲ್ಲಂಘನೆ ಆಗಿರುವ ಬಗ್ಗೆ ತಿಳಿದು ಬರಲಿದೆ ಕೂಡಲೇ ಸಂಚಾರಿ ನಿಯಮ ಉಲ್ಲಂಘನೆಯಾದ ಬಗ್ಗೆ ಎಫ್.ಐ.ಆರ್. ದಾಖಲಾಗುವುದು. ಯಾರು ಗಮನಿಸುವುದಿಲ್ಲ ವೆಂದು ಸ್ಪೀಡ್ ಲಿಮಿಟ್ ಅನ್ನು ಮೀರುವಂತಿಲ್ಲ, ಯಾವಾಗಲೂ ವೇಗವಾಗಿ ವಾಹನವನ್ನು ಚಲಾಯಿಸಬಾರದು. ಎರಡು ವಾಹನಗಳ ನಡುವೆ ಕನಿಷ್ಠ ಅಂತರವಿರಬೇಕು. ಸಡನ್ ಬ್ರೇಕ್ ಹಾಕುವುದನ್ನು ತಪ್ಪಿಸಬೇಕು. ಸಂಚಾರದಲ್ಲಿ ಮೊಬೈಲ್ ಬಳಕೆ ಮಾಡಲೇಬಾರದು. ಅನಿವಾರ್ಯವಾದಲ್ಲಿ ಮಾತ್ರ ವಾಹನವನ್ನು ಎಡಬದಿಯಲ್ಲಿ ನಿಲ್ಲಿಸಿ ಮೊಬೈಲ್ ಬಳಸಬೇಕು ಎಂದು ಹೇಳಿದರು.

ಚಾಲನೆ ಪರವಾನಗಿ ಪಡೆದವರೆಲ್ಲರೂ ಉತ್ತಮ ಚಾಲಕರು ಎಂದೆನಿಸಿಕೊಳ್ಳುವುದಿಲ್ಲ, ಸಂಚಾರಿ ನಿಯಮಗಳನ್ನು ಅರಿತು ಅವುಗಳನ್ನು ಪಾಲಿಸಬೇಕು. ಯಾವಾಗಲೂ ಸುರಕ್ಷಿತ ಚಾಲನೆಯನ್ನು ಮಾತ್ರ ಮಾಡಬೇಕು. ಅವರು ಮಾತ್ರ ಉತ್ತಮ ಚಾಲಕರಾಗಿರುತ್ತಾರೆ. ಅತಿಯಾದ ವೇಗದಲ್ಲಿ ಓಡಿಸುವವರು ಚಾಲಕ ಕೆಟ್ಟ ಚಾಲಕರಾಗಿರುತ್ತಾರೆ, ಹಿರಿಯ ನಾಗರಿಕರು, ಆಶಕ್ತರು ರಸ್ತೆ ದಾಟುವಾಗ ಎಚ್ಚರಿಕೆಯಿಂದ ವಾಹನ ಚಲಾಯಿಸಬೇಕು. ಲೈಸನ್ಸ್ ಇಲ್ಲದೆ ವಾಹನ ಓಡಿಸಿದರೆ ಶಿಕ್ಷೆ ಕಟ್ಟಿಟ್ಟ ಬುತ್ತಿ, ಕುಡಿದು ವಾಹನ ಓಡಿಸುವುದು ಕೂಡ ಮಹಾತಪ್ಪು. ರಸ್ತೆಯಲ್ಲಿ ಓಡುವುದು, ಆಟವಾಡುವುದು ಮಾಡಬಾರದು. ಸಂಚಾರದಲ್ಲಿ ಉಗುಳುವುದು, ಕೈಸನ್ನೇ ಮಾಡುವುದು ಅಂತಹ ಯಾವುದೇ ಚಟುವಟಿಕೆಗಳನ್ನು ಮಾಡಬಾರದು ಎಂದವರು ಕಿವಿಮಾತು ಹೇಳಿದರು.

ಸಂಚಾರಿ ನಿಯಮ ಅರಿವಿಲ್ಲ ಎಂದರೆ ಪೊಲೀಸರು ದಂಡ ಹಾಕಿಯೇ ಹಾಕುತ್ತಾರೆ, ಈ ನಿಯಮಗಳು ಗೊತ್ತಿಲ್ಲ ಎಂಬುವುದಕ್ಕೆ ಕ್ಷಮಾಪಣೆ ಇರುವುದಿಲ್ಲ ಪ್ರತಿಯೊಬ್ಬ ಜನಸಾಮಾನ್ಯರಿಗೂ ಕಾನೂನಿನ ಅರಿವಿರಬೇಕು ಅದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಉದ್ದೇಶವಾಗಿದೆ ಪ್ರತಿಯೊಬ್ಬರಲ್ಲೂ ಕಾನೂನಿನ ಅರಿವು ಮೂಡಿಸುವುದು ಹಾಗೂ ಶೋಷಿತರಿಗೆ ಉಚಿತ ಕಾನೂನಿನ ನೆರವು ಹಾಗೂ ಸರ್ಕಾರದ ಸವಲತ್ತುಗಳನ್ನು ತಿಳಿಸಿ ಕೊಡುವುದು ನಮ್ಮ ಉದ್ದೇಶವಾಗಿದೆ ಎಂದವರು ತಿಳಿಸಿದರು.

ರಾಮನಗರದ ಪ್ರಾದೇಶಿಕ ಸಾರಿಗೆ ಅಧಿಕಾರಿ ಎ. ವಿವೇಕಾನಂದ, ರೆಡ್ ಕ್ರಾಸ್ ಸಂಸ್ಥೆಯ ಸಭಾಪತಿ ಎಚ್.ವಿ.ಶೇಷಾದ್ರಿ ಅಯ್ಯರ್, ಉಪಸಭಾಪತಿಗಳು ಹಾಗೂ ರಾಜ್ಯ ಶಾಖೆಯ ಆಡಳಿತ ಮಂಡಳಿಯ ಸದಸ್ಯ ವಿ. ಬಾಲಕೃಷ್ಣ, ಪ್ರಧಾನ ಕಾರ್ಯದರ್ಶಿ ಕೆ. ಎಸ್. ಶಂಕರಯ್ಯ, ಖಜಾಂಚಿ ಎಂ ಪರಮಶಿವಯ್ಯ, ಸಭಾಪತಿ ಮಧುಸೂದನ್ ಎನ್. ವೇದಿಕೆಯಲ್ಲಿದ್ದರು. ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.